**ಕರ್ನಾಟಕ ಸರ್ಕಾರ**

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು 560001.**

ಸಂಖ್ಯೆ:ಸಿ7(8)ಆರ್.ಟಿ.ಇ/22-23ನೇ ದಾ.ಪ್ರ.60/2021-22 ದಿನಾಂಕ:13.04.2022

**::ಸುತ್ತೋಲೆ::**

ವಿಷಯ: 2022-23ನೇ ಸಾಲಿನ ಮೊದಲ ಸುತ್ತಿನ ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಯಾದ ಮಕ್ಕಳ ಶಾಲಾ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಕುರಿತು

ಉಲ್ಲೇಖ:1) ಉಚಿತ ಮತ್ತು ಕಡ್ಡಾಯ ಶಿಕ್ಷಣ ಮಕ್ಕಳ ಹಕ್ಕು ಕಾಯಿದೆ 2009

2) ಉಚಿತ ಮತ್ತು ಕಡ್ಡಾಯ ಶಿಕ್ಷಣಕ್ಕಾಗಿ ಮಕ್ಕಳ ಹಕ್ಕು ನಿಯಮಗಳು-2012

3) ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:07.01.2022 ಮತ್ತು 02.03.2022

@@@@@

2022-23ನೇ ಸಾಲಿನ ಮೊದಲ ಸುತ್ತಿನ ಲಾಟರಿ ಪ್ರಕ್ರಿಯೆಯನ್ನು ದಿನಾಂಕ:04.04.2022ರಂದು ನಡೆಸಲಾಗಿದ್ದು ಸದರಿ ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಗೊಂಡ ಮಕ್ಕಳನ್ನು ಶಾಲೆಗೆ ದಾಖಲಾತಿ ಮಾಡಲು ದಿನಾಂಕ:16.04.2022 ಕೊನೆಯ ದಿನಾಂಕವೆಂದು ನಿಗದಿಪಡಿಸಲಾಗಿದ್ದು, 2022-23ನೇ ಸಾಲಿನ ಮೊದಲ ಸುತ್ತಿನ ಲಾಟರಿ ಪ್ರಕ್ರಿಯೆಯಲ್ಲಿ ಒಟ್ಟು 7596 ಸೀಟುಗಳನ್ನು ಹಂಚಿಕೆ ಮಾಡಲಾಗಿದ್ದು ದಿನಾಂಕ:11.04.2022ಕ್ಕೆ ಕೇವಲ 1495 ಮಕ್ಕಳನ್ನು ಮಾತ್ರ ಆನ್‌ಲೈನ್ ತಂತ್ರಾಂಶದಲ್ಲಿ ದಾಖಲಾತಿ ಮಾಡಿಕೊಂಡಿರುವುದು ಕಂಡು ಬಂದಿರುತ್ತದೆ. ನಿಗದಿತ ಪ್ರಮಾಣಕ್ಕಿಂತ ಕಡಿಮೆ ಸಂಖ್ಯೆಯ ಮಕ್ಕಳು ದಾಖಲಾತಿಯಾಗಿರುವುದರಿಂದ ಮೊದಲ ಸುತ್ತಿನ ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಯಾದ ಎಲ್ಲಾ ಮಕ್ಕಳನ್ನು ಶಾಲೆಗೆ ದಾಖಲಾತಿ ಮಾಡಲು ಅನುಕೂಲವಾಗುವಂತೆ ಶಾಲಾ ದಾಖಲಾತಿ ಅವಧಿಯನ್ನು ದಿನಾಂಕ:26.04.2022ರವರೆಗೆ ವಿಸ್ತರಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

13/4/22

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

ರವರಿಗೆ,

1) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು ಇವರ ಮುಖಾಂತರ ಸಂಬಂಧಿಸಿದ ಶಾಲಾ ಮುಖ್ಯಸ್ಥರಿಗೆ ಸೂಕ್ತ ಮಾರ್ಗದರ್ಶನ ನೀಡಲು ಸೂಚಿಸಿದೆ.